ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ಹಾಲು ಉತ್ಪಾದಕರಿಗೆ ನೀಡಲಾಗುತ್ತಿರುವ ಸಹಾಯಧನದ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):-

123 (132) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾಲು ಉತ್ಪಾದಕರಿಗೆ ಸರ್ಕಾರ ಪ್ರತಿ ಲೀಟರ್‌ಗೆ ನೀಡುತ್ತಿರುವ ಸಹಾಯಧನ ಎಷ್ಟು ;

(ಆ) ಸಹಾಯಧನ ಬಿಡುಗಡೆಗೆ ಬಾಕಿ ಇರುವ ಮೊತ್ತವೆಷ್ಟು ;

(ಇ) ಯಾವ ಕಾಲಮಿತಿಯಲ್ಲಿ ಬಾಕಿ ಸಹಾಯಧನ ಬಿಡುಗಡೆಗೊಳಿಸಲಾಗುವುದು ;

(ಈ) ಹಾಲು ಉತ್ಪಾದಕರ ಒಕ್ಕೂಟಗಳು ಹಾಲು ಉತ್ಪಾದಕರಿಗೆ ಪ್ರತಿ ಲೀಟರ್‌ಗೆ ರೂ.2.00/-ಗಳು ಕಡಿಮೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಈ ರೀತಿ ಕಡಿಮೆ ಮಾಡಿರುವುದರಿಂದ ಹಾಲು ಉತ್ಪಾದಕರು ಹೆಚ್ಚಿನ ಆರ್ಥಿಕ ತೊಂದರೆಗೊಳಗಾಗಿದ್ದು, ಕಡಿಮೆ ಮಾಡಿರುವ ಮೊತ್ತವನ್ನು ಸರ್ಕಾರವೇ ಹಾಲು ಉತ್ಪಾದಕರಿಗೆ ನೀಡಲು ಸಾಧ್ಯವೇ ?